ಕರ್ನಾಟಕ ಸರ್ಕಾರ

# ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-01

ಸಂಖ್ಯೆ: ಸಿ4(2)ಪ್ರೌ.ಶಾ.ಶಿ.ಸ.ಶಿ.ಜೇ.ಪ.37/2018-19 ದಿನಾಂಕ: 13.01.2020

## ಅಧಿಸೂಚನೆ

ವಿಷಯ : ದಿನಾಂಕ: 01-01-2019 ರಲ್ಲಿ ಇದ್ದಂತೆ ಬೆಂಗಳೂರು ಮತ್ತು ಮೈಸೂರು ವಿಭಾಗದ ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರು ಗ್ರೇಡ್-2 ರವರ ತಾತ್ಕಾಲಿಕ ಜೇಷ್ಠತಾ ಪಟ್ಟಿಯ ಕರಡನ್ನು ಪ್ರಕಟಿಸುವ ಬಗ್ಗೆ.

ಉಲ್ಲೇಖ : 1. ಸರ್ಕಾರದ ಆದೇಶ ಸಂಖ್ಯೆ : ಇಡಿ 152 ಎಲ್ ಬಿ ಪಿ 2014 ದಿನಾಂಕ; 20-05-2014
2. ದಿನಾಂಕ:02.01.2020ರಂದು ಮಾನ್ಯ ಆಯುಕ್ತರ ಅಧ್ಯಕ್ಷತೆಯಲ್ಲಿ ನಡೆದ ಸಭೆ.

***

ಬೆಂಗಳೂರು ಮತ್ತು ಮೈಸೂರು ವಿಭಾಗದ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಉಲ್ಲೇಖ(1) ರಲ್ಲಿ ಪ್ರಕಟಿಸಿ ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿತ್ತು. ಈ ಪಟ್ಟಿಗೆ ಸಂಬಂಧಿಸಿದಂತೆ ಪ್ರೌಢ ಶಾಲಾ ಶಿಕ್ಷಕರುಗಳಿಂದ ಆಕ್ಷೇಪಣೆಗಳನ್ನು ಸಲ್ಲಿಸಿರುತ್ತಾರೆ. ಎರಡು ಬಾರಿ ಆಕ್ಷೇಪಣೆಗಳನ್ನು ಪಡೆದು ಸಿದ್ದಪಡಿಸಿ ಪ್ರಕಟಿಸಲಾದ ಜೇಷ್ಠತಾ ಪಟ್ಟಿಯನ್ನು ಪರಿಶೀಲಿಸಿದ ನಂತರ ದಿನಾಂಕ:02.01.2020 ರಂದು ಆಯುಕ್ತರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಪರಿಶೀಲಿಸಲಾಗಿದೆ.

ಈ ಸಂದರ್ಭದಲ್ಲಿ ಪಟ್ಟಿಯನ್ನು ಪರಿಶೀಲಿಸಿದ ನಂತರ ಆಯುಕ್ತರು ನೀಡಿದ ಸೂಚನೆಯನ್ವಯ ಜಿಲ್ಲೆ ಉಪನಿರ್ದೇಶಕರುಗಳು ಈ ಕಛೇರಿಗೆ ಸಲ್ಲಿಸಿರುವ ತಿದ್ದುಪಡಿಗಳನ್ನು ಸೇರಿಸಿದ ನಂತರ ಈ ಕರಡು ಪಟ್ಟಿಯನ್ನು ಸಿದ್ದಪಡಿಸಲಾಗಿದೆ. ಈ ಕರಡು ಪಟ್ಟಿಗೆ ಸಂಬಂಧಿಸಿದಂತೆ ಜಿಲ್ಲಾ ಉಪನಿರ್ದೇಶಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳು ವ್ಯಾಪಕ ಪ್ರಚಾರ ಮಾಡುವುದು. ಎಲ್ಲಾ ಶಿಕ್ಷಕರಿಗೂ ಕರಡು ಪಟ್ಟಿಯನ್ನು ಪ್ರಕಟಿಸಿರುವ ಬಗ್ಗೆ ಸಾಮಾಜಿಕ ಜಾಲತಾಣಗಳ ಮೂಲಕ ವ್ಯಾಪಕ ಪ್ರಚಾರ ನೀಡಿ ಎಲ್ಲಾ ಶಿಕ್ಷಕರುಗಳಿಗೆ ಹಾಗೂ ಸಂಘದ ಪದಾಧಿಕಾರಿಗಳಿಗೂ ಸಹ ತಲುಪುವಂತೆ ಮಾಡುವುದು.

ಈ ತಾತ್ಕಾಲಿಕ ಕರಡು ಜೇಷ್ಠತಾ ಪಟ್ಟಿಗೆ ಸಂಬಂಧಿಸಿದಂತೆ ಆಕ್ಷೇಪಣೆಗಳೇನಾದರು ಇದ್ದಲ್ಲಿ ಸಂಬಂಧಿಸಿದ ಶಿಕ್ಷಕರು ಸಮರ್ಥನೀಯ ಪೂರಕ ದಾಖಲೆಗಳೊಂದಿಗೆ ದಿನಾಂಕ:20.01.2020 **ರೊಳಗೆ** ಸಂಬಂಧಿಸಿದ ಉಪ ನಿರ್ದೇಶಕರು (ಆಡಳಿತ)ರವರಿಗೆ ನಿಗದಿತ ನಮೂನೆಯಲ್ಲಿ ನೇರವಾಗಿ ಸಲ್ಲಿಸುವುದು. ನಿಗಿದಿತ ದಿನಾಂಕದೊಳಗೆ ಬಾರದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

ನಿರ್ದೇಶಕರು (ಪ್ರೌಢ ಶಿಕ್ಷಣ)

**ಇವರಿಗೆ :**

1. ಬೆಂಗಳೂರು ಮತ್ತು ಮೈಸೂರು ವಿಭಾಗದ ಎಲ್ಲಾ ಉಪ ನಿರ್ದೇಶಕರು (ಆಡಳಿತ) ಮತ್ತು (ಅಭಿವೃದ್ಧಿ) ರವರಿಗೆ ಸೂಕ್ತ ಕ್ರಮಕ್ಕೆ
2. ಬೆಂಗಳೂರು ಮತ್ತು ಮೈಸೂರು ವಿಭಾಗದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾಶಿಇ, ರವರಿಗೆ ಕಳುಹಿಸುತ್ತಾ ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ತಿಳಿಸಿದೆ.

**ಪ್ರತಿಯನ್ನು :**

1. ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ,ಬೆಂಗಳೂರು ರವರಿಗೆ ವಂದನೆಗಳೊಂದಿಗೆ ಅವಗಾಹನೆಗೆ ಸಲ್ಲಿಸಿದೆ.
2. ಜಂಟಿ ನಿರ್ದೇಶಕರು (ಆಡಳಿತ), ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರಿಗೆ ಮಾಹಿತಿಗಾಗಿ.
3. ಸಹ ನಿರ್ದೇಶಕರು, ಬೆಂಗಳೂರು ವಿಭಾಗ-01, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
4. ಜಂಟಿ ನಿರ್ದೇಶಕರು, ಮೈಸೂರು ವಿಭಾಗ, ಮೈಸೂರು ರವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.

## ನಮೂನೆ

### ದಿನಾಂಕ 13-01-2020ರಂದು ಪ್ರಕಟಿಸಿರುವ ಪ್ರೌಢಶಾಲಾ ಸಹ ಶಿಕ್ಷಕರ ಕರಡು ಜೇಷ್ಠತಾಪಟ್ಟಿಗೆ ಆಕ್ಷೇಪಣೆ

| ವಿವರ | SENIORITY NO | BLOCK SL NO | DISTRICT NAME | CANDIDATE NAME | PRESENT WORKING SCHOOL NAME | DATE OF BIRTH | SEX | QUALIFI-CATION | SELECTION / PRAMOTION / TRANSFER DATE TO SEC SCHOOL ASSIT G-2 IN MYS DIV | ENTRY IN TO SERVICE | SUBJECT | TOTAL MERIT | CATE GORY | DR OR PR | MASTER DEGREE |
|---|---|---|---|---|---|---|---|---|---|---|---|---|---|---|---|
| ಹಾಲಿ ಇರುವ ವಿವರ | | | | | | | | | | | | | | | |
| ತಿದ್ದುಪಡಿಯಾಗ ಬೇಕಾದ ವಿವರ | | | | | | | | | | | | | | | |
| ಲಗತ್ತಿಸಿರುವ ದಾಖಲೆಗಳು | | | | | | | | | | | | | | | |

ವಿಶೇಷ ಸೂಚನೆ: ಆಕ್ಷೇಪಣೆ ಸಲ್ಲಿಸುವ ಶಿಕ್ಷಕರು ನಮೂನೆಯೊಂದಿಗೆ ಅಂತರ್‌ಜಾಲದಲ್ಲಿ ಪ್ರಕಟಿಸಿರುವ ಕರಡು ಪಟ್ಟಿಯಲ್ಲಿ ಅವರ ಹೆಸರಿರುವ ಪುಟದ ಫೋಟೋ ಪ್ರತಿ ಲಗತ್ತಿಸಿ ಸಲ್ಲಿಸಬೇಕು

ದೃಢೀಕರಣ'

ಶಿಕ್ಷಕರಕ ಸಹಿ ಮತ್ತು ಪದನಾಮ

ಮುಖ್ಯ ಶಿಕ್ಷಕರು

ಮೊಬೈಲ್ ನಂ:

ದೃಢೀಕರಣ'

ದಿನಾಂಕ:

ಸ್ಥಳ :

ಉಪ ನಿರ್ದೇಶಕರು (ಆಡಳಿತ)